ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ3/ NMMS ಪರೀಕ್ಷೆ/14/2022–23

ದಿನಾಂಕ:19.11.2022

## ಜ್ಞಾಪನ

ವಿಷಯ: NMMS ಪರೀಕ್ಷೆಗೆ ಸಂಬಂಧಿಸಿದಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಚಲನ್ ಪ್ರತಿ ಮತ್ತು ನಾಮಿನಲ್ ರೋಲ್‌ನ ಪ್ರತಿಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: 1.ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:22.09.2022.
2. ಈ ಕಛೇರಿ ಪತ್ರದ ಸಮಸಂಖ್ಯೆ ದಿನಾಂಕ:21.10.2022, 10.11.2022, 17.11.2022

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2022–23ನೇ ಸಾಲಿನ NMMS ಪರೀಕ್ಷೆಯನ್ನು ದಿನಾಂಕ:18.12.2022 ರಂದು ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗೆ ದಿನಾಂಕ:29.10.2022 ರಿಂದ 21.11.2022 ರವರೆಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಪ್ರತಿ ಶಾಲೆಗೆ ಒಂದರಂತೆ **ದಿನಾಂಕ:22.11.2022** ರಿಂದ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಆಗಲಿದ್ದು, ಶಾಲೆಯ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಚಲನ್‌ಗಳನ್ನು ಶಾಲಾ ಲಾಗಿನ್‌ನಲ್ಲಿ Download ಮಾಡಿ ಮುದ್ರಿಸಿಕೊಂಡು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ **ದಿನಾಂಕ:30.11.2022** ರೊಳಗಾಗಿ ಕಡ್ಡಾಯವಾಗಿ ಪಾವತಿಸುವಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.

ಮುಂದುವರೆದು, NMMS ಪರೀಕ್ಷಾ ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿ ಮತ್ತು ನಾಮಿನಲ್ ರೋಲ್‌ನ(NR) ಪ್ರತಿಯನ್ನು ಪತ್ರದೊಂದಿಗೆ **(Covering Letter)** ಈ ಕಛೇರಿಯ ಕೆಳಕಂಡ ವಿಳಾಸಕ್ಕೆ <u>ನೋಂದಾಯಿತ ಅಂಚೆ</u> ಮೂಲಕ ದಿನಾಂಕ: **05.12.2022** ರೊಳಗಾಗಿ ತಲುಪಿಸುವುದು.

ವಿಳಾಸ: ಕಾರ್ಯನಿರ್ವಾಹಕ ನಿರ್ದೇಶಕರು,
**ಕೆ.ಎಸ್.ಕ್ಯು.ಎ.ಎ.ಸಿ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು**
(ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ), 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.

**ಅಂಚೆ ಲಕೋಟೆಯ ಮೇಲೆ ದಪ್ಪವಾಗಿ "NMMS ಪರೀಕ್ಷಾ ಶುಲ್ಕ ಪಾವತಿಸಿದ ಚಲನ್– ಜಿಲ್ಲೆಯ ಹೆಸರನ್ನು ಬರೆಯುವುದು.**

(ಉದಾ:– NMMS ಪರೀಕ್ಷೆಗೆ ಶುಲ್ಕ ಪಾವತಿಸಿದ ಚಲನ್–ಉಡುಪಿ)

- ನಿಗದಿತ ಚಲನ್‌ನಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಈ ಕಛೇರಿಗೆ ಚಲನ್ ತಲುಪಿಸಿದ ಶಾಲೆಯ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಪತ್ರ ದೊರೆಯುತ್ತದೆ. ಪರೀಕ್ಷಾ ಶುಲ್ಕ ಪಾವತಿ ಮಾಡದಿದ್ದಲ್ಲಿ ಪ್ರವೇಶ ಪತ್ರ ದೊರೆಯುವುದಿಲ್ಲ.
- ಕೆನರಾ ಬ್ಯಾಂಕ್ ಹೊರತುಪಡಿಸಿ ಇತರೆ ಬ್ಯಾಂಕ್‌ಗಳಲ್ಲಾಗಲಿ ಅಥವಾ ಆನ್‌ಲೈನ್ ಮೂಲಕ (NEFT, RTGS, Phone Pay, Google Pay ಇತ್ಯಾದಿ) ಪಾವತಿಸುವಂತಿಲ್ಲ. ಈ ರೀತಿ ಪಾವತಿಯಾದ ಹಣವನ್ನು ಹಿಂದಿರುಗಿಸಲಾಗುವುದಿಲ್ಲ.

ಉಪನಿರ್ದೇಶಕರು(ಅಭಿವೃದ್ಧಿ), NMMS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಶಾಲೆಗಳ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಸದರಿ ಮಾಹಿತಿಯನ್ನು ನೀಡುವುದು ಮತ್ತು ಈ ಬಗ್ಗೆ ಸೂಕ್ತ ಕ್ರಮವಹಿಸಲು ತಿಳಿಸಿದೆ.

19/11/22
ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2. NMMS ಪರೀಕ್ಷಾ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3. ಎಲ್ಲಾ ಬ್ಲಾಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.